ನಿ-330-(96) (76)

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರ ನಿಯಮ 330ರ ಅಡಿಯಲ್ಲಿನ ಗಮನ ಸೆಳೆಯುವ ಸೂಚನೆ ಸಂಖ್ಯೆ:76ಗೆ ಮಾನ್ಯ ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳು ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖಾ ಸಚಿವರ ಉತ್ತರ.

ಪ್ರಶ್ನೆ:

ಪ್ರಸ್ತುಕ ಸಾಲಿನಲ್ಲಿ ಬೆಳೆ ತುಂಬಾ ಚೆನ್ನಾಗಿ ಬೆಳೆದಿದ್ದರೂ ಕೂಡ ಇತ್ತೀಚಿನ ಅತಿವೃಷ್ಟಿಯಿಂದ ರೈತರು ತುಂಬಾ ನಷ್ಟಕ್ಕೊಳಗಾಗಿದ್ದಾರೆ. ಆ ಕಾರಣದಿಂದ ಕೇಂದ್ರ ಸರ್ಕಾರದ ಕನಿಷ್ಟ ಬೆಂಬಲ ಬೆಲೆ (ಎಂ.ಎಸ್.ಪಿ) ದರದಲ್ಲಿ ಭತ್ತ ಖರೀದಿ ಮಾಡಲು ಅಗತ್ಯವಿರುವ ಕಡೆ ಕೂಡಲೇ ಭತ್ತ ಖರೀದಿ ಕೇಂದ್ರಗಳನ್ನು ತೆರೆಯದೆ ಹೋದರೆ ಭತ್ತ ಬೆಳೆದ ರೈತರು ಮತ್ತಷ್ಟು ನಷ್ಟಕೊಕ್ಕಾಳಗಾಗುತ್ತಾರೆಂಬ ಗಂಭೀರ ಸಮಸ್ಯೆ ಕುರಿತು ಮಾನ್ಯ ಅರಣ್ಯ ಮತ್ತು ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಗಮನವನ್ನು ಸೆಳೆಯ ಬಯಸುತ್ತೇನೆ.

ಉತ್ತರ:

2021-22ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ 5.00 ಲಕ್ಷ ಮೆ.ಟನ್ ಭತ್ತವನ್ನು ಖರೀದಿಸಲು ಕೇಂದ್ರ ಸರ್ಕಾರವು ಅನುಮತಿಯನ್ನು ನೀಡಿದ್ದು, ಈ ಕೆಳಕಂಡಂತೆ ಖರೀದಿ ದರವನ್ನು ನಿಗಧಿಪಡಿಸಿದೆ.

| ಕ್ರ.ಸಂ | ಧಾನ್ಯ | ದರ (ಪ್ರತಿ ಕ್ವಿಂಟಾಲ್‌ಗೆ ರೂ.ಗಳಲ್ಲಿ) |
|---|---|---|
| 1 | ಭತ್ತ - ಸಾಮಾನ್ಯ | 1940-00 |
| 2 | ಭತ್ತ-ಗ್ರೇಡ್-ಎ | 1960-00 |

ಕೇಂದ್ರ ಸರ್ಕಾರವು ನೀಡಿರುವ ಅನುಮತಿಯಂತೆ 2021-22ನೇ ಸಾಲಿನಲ್ಲಿ ರಾಜ್ಯದ ರೈತರಿಂದ 5.00 ಲಕ್ಷ ಮೆ.ಟನ್ ಭತ್ತವನ್ನು ಖರೀದಿಸುವ ಬಗ್ಗೆ ಸಚಿವ ಸಂಪುಟ ಉಪ ಸಮಿತಿಯ ಮುಂದೆ ಪ್ರಸ್ತಾವನೆಯನ್ನು ಮಂಡಿಸಿದ್ದು, ರಾಜ್ಯದಲ್ಲಿ ಭತ್ತ ಬೆಳೆದಿರುವ ರೈತರಿಂದ ಪ್ರತಿ ಎಕರೆ ಗೆ 25 ಕ್ವಿಂ ನಂತೆ ಪ್ರತಿ ರೈತರಿಂದ ಗರಿಷ್ಠ 40ಕ್ವಿಂ ಭತ್ತವನ್ನು ಖರೀದಿಸಲು ಸಚಿವ ಸಂಪುಟ ಉಪ ಸಮಿತಿಯು ಅನುಮೋದನೆ ನೀಡಿದೆ.

ಸಚಿವ ಸಂಪುಟ ಉಪ ಸಮಿತಿಯು ಅನುಮೋದಿಸಿರುವಂತೆ ರಾಜ್ಯದ ರೈತರಿಂದ ಕನಿಷ್ಟ ಬೆಂಬಲಬೆಲೆ ಯೋಜನೆಯಡಿ ಭತ್ತವನ್ನು ಖರೀದಿಸಲು ಈಗಾಗಲೇ ಅಗತ್ಯ ಆದೇಶವನ್ನು ಹೊರಡಿಸಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿದೆ. 2021-22 ನೇ ಸಾಲಿನ ಮುಂಗಾರು ಭತ್ತ ಖರೀದಿಗಾಗಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದ್ದು, ಇದುವರೆಗೂ 10254 ರೈತರು ನೋಂದಣಿ ಮಾಡಿಕೊಂಡಿರುತ್ತಾರೆ.

ಆನಾಸ 125 ಆರ್‌ಪಿಆರ್ 2021 (ಇ-ಆಫೀಸ್)

(ಉಮೇಶ ವಿ. ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.